**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/09/ಇಎಸ್‌ಟಿ(2)ಎ/2014

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 23-07-2014

**ಸುತ್ತೋಲೆ**

ವಿಷಯ: ಇಲಾಖೆಯ ಅಧೀನದಲ್ಲಿ ಬರುವ ನಿರ್ದೇಶನಾಲಯ / ಸರ್ಕಾರಿ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಿಬ್ಬಂದಿವರ್ಗದವರ ವರ್ಗಾವಣೆಗೆ ಸಂಬಂಧಿಸಿದಂತೆ ವರ್ಗಾವಣೆಗೆ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ವಿಶೇಷ ರಾಜ್ಯ ಪತ್ರಿಕೆ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 75 ಶಾಸನ 2012 ಬೆಂಗಳೂರು ದಿ: 06.02.2013

2. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 74 ಡಿಟಿಇ 2013 ದಿನಾಂಕ: 05-03-2014

*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರದ ಅಧಿಸೂಚನೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗಾವಣೆ ನಿಯಂತ್ರಿಸುವ ಸಲುವಾಗಿ ಹೊರಡಿಸಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆ ವರ್ಗಾವಣೆ ನಿಯಂತ್ರಣ) ಕಾಯ್ದೆ 2012ನ್ನು ಉಲ್ಲೇಖ(2)ರ ಪತ್ರದಲ್ಲಿ ದಿನಾಂಕ: 01-04-2014ರಿಂದ ಅಧಿಕೃತವಾಗಿ ಜಾರಿಗೆ ತರಲಾಗಿದೆ. ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿರ್ದೇಶನಾಲಯ / ಸರ್ಕಾರಿ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕ/ಬೋಧಕೇತರ ಸಿಬ್ಬಂದಿಯವರಿಂದ ಬಂದಂತಹ ಮಾಹಿತಿಯನ್ನು ಪರಿಶೀಲಿಸಿ **ವರ್ಗಾವಣೆಗೆ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆ ವರ್ಗಾವಣೆ ನಿಯಂತ್ರಣ) ಕಾಯ್ದೆ 2013ರ ನಿಯಮ 3(3)(d)ರನ್ವಯ ಲಗತ್ತಿಸಿರುವ ಅನುಬಂಧದಲ್ಲಿ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಐದು ದಿನದೊಳಗಾಗಿ (28.07.2014 ಸಂಜೆ 5.30ರ ಒಳಗೆ) ಸಂಬಂಧಪಟ್ಟ ಪ್ರಾಂಶುಪಾಲರ ಮುಖಾಂತರವೇ ಆಕ್ಷೇಪಣೆಗಳನ್ನು ಸ್ಕ್ಯಾನ್ ಮಾಡಿ ಲಗತ್ತಿಸಿ ಈ ಕೆಳಕಂಡ ಇ-ಮೇಲ್ ವಿಳಾಸಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ. ನಿಗದಿತ ಸಮಯದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಬಾರದೆಂದು ಸೂಚಿಸಲಾಗಿದೆ.

dtetransfer201415@gmail.com
vkirankumar87@gmail.com
dtekar@hotmail.com

ನಿರ್ದೇಶಕರು

**ಇವರಿಗೆ:**

1. ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್/ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರು ಈ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಿಂದ ಡೌನ್‌ಲೌಡ್ ಮಾಡಿ ಈ ದಿನವೇ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು. ದಿನಾಂಕ:28.07.2014ರ ಸಂಜೆ 5.30ರ ಒಳಗೆ ಬಂದಂತಹ ಎಲ್ಲಾ ಆಕ್ಷೇಪಣೆ/ ಮನವಿ /ದೂರುಗಳನ್ನು ಸ್ಕ್ಯಾನ್ ಮಾಡಿ ಪ್ರಾಂಶುಪಾಲರ ಇ-ಮೇಲ್ ಮುಖಾಂತರವೇ ಮೇಲ್ಕಂಡ ಇ-ಮೇಲ್ ವಿಳಾಸಕ್ಕೆ ಕಳುಹಿಸತಕ್ಕದ್ದು.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ ಬೆಂಗಳೂರು-560001.
2. ಇ-ಆಡಳಿತ.
3. ನಿರ್ದೇಶಕರ ಆಪ್ತಶಾಖೆ.
4. ಕಛೇರಿ ಪ್ರತಿ.